**All India Radio: Bangalore**
**National Bulletin In Kannada**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**10.05.2026 19.35 p.m.**

---

ಮುಖ್ಯಾಂಶಗಳು

೧. ತೆಲಂಗಾಣದಲ್ಲಿ ೯ ಸಾವಿರದ ೪೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ

೨. ಅಸ್ಸಾಂನಲ್ಲಿ ಎನ್‌ಡಿಎ ಶಾಸಕಾಂಗ ಪಕ್ಷದ ನಾಯಕರಾಗಿ ಡಾ.ಹಿಮಂತ ಬಿಸ್ವಾ ಶರ್ಮಾ ಆಯ್ಕೆ

೩. ತಮಿಳುನಾಡಿನ ನೂತನ ಮುಖ್ಯಮಂತ್ರಿಯಾಗಿ ಟಿವಿಕೆ ಮುಖ್ಯಸ್ಥ ವಿಜಯ್ ಪದಗ್ರಹಣ; ಸರ್ಕಾರದ ಮೊದಲ ಗ್ಯಾರಂಟಿ ಯೋಜನೆಗೆ ಸಹಿ

೪. ಐಪಿಎಲ್ ಟಿ-೨೦ ಕ್ರಿಕೆಟ್: ಮುಂಬೈ ಇಂಡಿಯನ್ಸ್ ವಿರುದ್ಧ ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫೀಲ್ಡಿಂಗ್ ಆಯ್ಕೆ

---

ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ತೆಲಂಗಾಣದಲ್ಲಿ ಸುಮಾರು ೯ ಸಾವಿರದ ೪೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಮೂಲಸೌಕರ್ಯ ಮತ್ತು ಕೈಗಾರಿಕಾ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು.

ಈ ಯೋಜನೆಗಳು ಸಂಪರ್ಕಗಳನ್ನು ಬಲಪಡಿಸುವುದು, ಲಾಜಿಸ್ಟಿಕ್ಸ್ ದಕ್ಷತೆಯನ್ನು ಸುಧಾರಿಸುವುದು, ಸುರಕ್ಷತೆಯನ್ನು ಹೆಚ್ಚಿಸುವುದು ಮತ್ತು ಜನರಿಗೆ ಉತ್ತಮ ಪ್ರಯಾಣ ಅನುಭವ ಒದಗಿಸುವ ಗುರಿ ಹೊಂದಿದೆ.

ಹೈದರಾಬಾದ್ ಅಂತಾರಾಷ್ಟ್ರೀಯ ಸಮಾವೇಶ ಕೇಂದ್ರದಲ್ಲಿ ನಡೆದ ಕಾರ್ಯಕ್ರಮದಲ್ಲಿ ತೆಲಂಗಾಣ ರಾಜ್ಯಪಾಲ ಶಿವಪ್ರತಾಪ್ ಶುಕ್ಲಾ, ಮುಖ್ಯಮಂತ್ರಿ ರೇವಂತ್ ರೆಡ್ಡಿ, ಕೇಂದ್ರ ಸಚಿವ ಜಿ.ಕಿಶನ್‌ರೆಡ್ಡಿ ಮತ್ತು ಹಿರಿಯ ನಾಯಕರು ಭಾಗವಹಿಸಿದ್ದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸರ್ಕಾರ ತೆಗೆದುಕೊಂಡ ಕ್ರಮಗಳಿಂದಾಗಿ ಪಶ್ಚಿಮ ಸಂಘರ್ಷದಿಂದ ಉದ್ಭವಿಸಿರುವ ಇಂಧನ ಬಿಕ್ಕಟ್ಟನ್ನು ಭಾರತ ಪರಿಣಾಮಕಾರಿಯಾಗಿ ನಿರ್ವಹಿಸುತ್ತಿದೆ ಎಂದು ಹೇಳಿದರು.

ಸೌರ ವಿದ್ಯುತ್ ಉತ್ಪಾದನೆಯಲ್ಲಿ ಭಾರತ ಪ್ರಮುಖ ರಾಷ್ಟ್ರಗಳಲ್ಲಿ ಒಂದಾಗಿ ಹೊರಹೊಮ್ಮಿದೆ ಎಂದು ಅವರು ತಿಳಿಸಿದರು. ಇದೇ ವೇಳೆ ಪ್ರಧಾನಿ ಅವರು, ವಾರಂಗಲ್‌ನಲ್ಲಿ ಸುಮಾರು ೧ ಸಾವಿರದ ೭೦೦ ಕೋಟಿ ರೂಪಾಯಿ ಅಂದಾಜು ವೆಚ್ಚದಲ್ಲಿ ನಿರ್ಮಿಸಲಾದ ಪಿಎಂ ಮಿತ್ರ ಪಾರ್ಕ್ ಅನ್ನು ಉದ್ಘಾಟಿಸಿದರು.

———————————

ವಿಕಸಿತ ಭಾರತದ ಸಂಕಲ್ಪ ಸಾಕಾರಕ್ಕೆ ರಾಜ್ಯಗಳ ಅಭಿವೃದ್ಧಿ ಅತ್ಯಂತ ಮಹತ್ವದ್ದು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿ, ವಿಧಾನಸಭಾ ಚುನಾವಣೆಯ ಗೆಲುವಿನ ಬಳಿಕ ಬೆಂಗಳೂರಿಗೆ ಇಂದು ಆಗಮಿಸಿದ್ದ ಪ್ರಧಾನಿ, ವಿಮಾನ ನಿಲ್ದಾಣದ ಬಳಿ ಬಿಜೆಪಿ ಪಕ್ಷದ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದರು.

ಸುಗಮ ಜೀವನ ಹಾಗೂ ಸುಲಲಿತ ವ್ಯವಹಾರಕ್ಕೆ ಅಗತ್ಯವಾದ ಮೂಲಸೌಕರ್ಯ, ಹೂಡಿಕೆ, ಉದ್ಯೋಗ ಮತ್ತು ಅಭಿವೃದ್ಧಿಗೆ ಬಿಜೆಪಿ-ಎನ್‌ಡಿಎ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು.

ಬಳಿಕ, ಆರ್ಟ್ ಆಫ್ ಲಿವಿಂಗ್‌ನ ೪೫ನೇ ವಾರ್ಷಿಕೋತ್ಸವದಲ್ಲಿ ಭಾಗವಹಿಸಿ, ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ನೂತನವಾಗಿ ನಿರ್ಮಿಸಲಾದ ಧ್ಯಾನ ಮಂದಿರವನ್ನು ಉದ್ಘಾಟಿಸಿ ಮಾತನಾಡಿದ ಪ್ರಧಾನಿ, ಒಂಬತ್ತು ರಾಷ್ಟ್ರೀಯ ಕಲ್ಯಾಣ ಗುರಿಗಳ ಸಾಧನೆಗಾಗಿ ಆರ್ಟ್ ಆಫ್ ಲಿವಿಂಗ್‌ನಂತಹ ಧಾರ್ಮಿಕ ಕೇಂದ್ರಗಳ ಬೆಂಬಲವನ್ನು ಬಯಸಿದರು.

ಯೋಗ, ಧ್ಯಾನ, ಪ್ರಾಣಾಯಾಮ ನಮ್ಮ ಪಾರಂಪರಿಕ, ಆಧ್ಯಾತ್ಮಿಕತೆಯ ಭಾಗವಾಗಿದ್ದು, ದೇಶದ ಪ್ರಗತಿಯಲ್ಲಿ ಯುವಜನತೆ ಪಾತ್ರವನ್ನು ರೂಪಿಸುವಲ್ಲಿ ಮಹತ್ವದ್ದಾಗಿವೆ. ಸ್ವಚ್ಛತಾ ಅಭಿಯಾನ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಚತೆ ಬಗ್ಗೆ ಸಾಮಾಜಿಕ ಅರಿವು ಮೂಡಿಸುವಲ್ಲಿ ನೆರವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

———————————

ಅಸ್ಸಾಂನಲ್ಲಿ ಹಿರಿಯ ನಾಯಕ ಡಾ.ಹಿಮಂತ ಬಿಸ್ವಾ ಶರ್ಮಾ ಅವರು ಬಿಜೆಪಿ ಶಾಸಕಾಂಗ ಪಕ್ಷ ಹಾಗೂ ಎನ್‌ಡಿಎ ಶಾಸಕಾಂಗ ಪಕ್ಷದ ನಾಯಕರಾಗಿ ಆಯ್ಕೆಯಾಗಿದ್ದಾರೆ.

ಗುವಾಹಟಿಯಲ್ಲಿ ಇಂದು ನಡೆದ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ರಂಜಿತ್ ಕುಮಾರ್ ದಾಸ್, ಬಿಸ್ವಜಿತ್ ಡೈಮರಿ, ಅಜಂತಾ ನಿಯೋಗ್, ರಾಜ್‌ದೀಪ್ ರಾಯ್, ಅಶೋಕ್ ಸಿಂಘಾಲ್ ಮತ್ತು ಪಿಜುಶ್ ಹಜಾರಿಕಾ ಸೇರಿ ಒಟ್ಟು ೮ ಬಿಜೆಪಿ ಶಾಸಕರು, ಡಾ. ಹಿಮಂತ ಬಿಸ್ವಾ ಶರ್ಮಾ ಅವರನ್ನು ಶಾಸಕಾಂಗ ಪಕ್ಷದ ನಾಯಕನನ್ನಾಗಿ ಪ್ರಸ್ತಾಪಿಸಿದರು. ಈ ಪ್ರಸ್ತಾವಕ್ಕೆ ಹಾಜರಿದ್ದ ಇತರ ಶಾಸಕರು ಅನುಮೋದಿಸಿದರು.

ನಂತರ ೧೦ ಎಜಿಪಿ ಶಾಸಕರು ಮತ್ತು ಬಿಪಿಎಫ್ ಶಾಸಕರ ಸಮ್ಮುಖದಲ್ಲಿ ಎಜಿಪಿ ನಾಯಕ ಅತುಲ್ ಬೋರಾ ಮತ್ತು ಬಿಪಿಎಫ್ ನಾಯಕ ರಿಹಾನ್ ಡೈಮರಿ ಅವರು ಡಾ.ಹಿಮಂತ ಬಿಸ್ವಾ ಶರ್ಮಾ ಅವರ ಹೆಸರನ್ನು ಎನ್‌ಡಿಎ ನಾಯಕರಾಗಿ ಪ್ರಸ್ತಾಪಿಸಿದರು. ಈ ಪ್ರಸ್ತಾಪಗಳನ್ನು ಅನುಸರಿಸಿ ಬಿಜೆಪಿ ಕೇಂದ್ರ ವೀಕ್ಷಕ ಜೆ.ಪಿ.ನಡ್ಡಾ ಅವರು ಡಾ.ಹಿಮಂತ ಬಿಸ್ವಾ ಶರ್ಮಾ ಅವರನ್ನು ಬಿಜೆಪಿ ಮತ್ತು ಎನ್‌ಡಿಎ ನಾಯಕರಾಗಿ ಅಧಿಕೃತವಾಗಿ ಘೋಷಿಸಿದರು.

ಬಳಿಕ ಶರ್ಮಾ ಅವರು ಲೋಕಭವನದಲ್ಲಿ ರಾಜ್ಯಪಾಲ ಲಕ್ಷ್ಮಣ್ ಪ್ರಸಾದ್ ಆಚಾರ್ಯ ಅವರನ್ನು ಭೇಟಿಯಾಗಿ ೧೦೨ ಶಾಸಕರ ಸಹಿಯೊಂದಿಗೆ ಸರ್ಕಾರ ರಚನೆಗೆ ಪ್ರಸ್ತಾವನೆಯನ್ನು ಔಪಚಾರಿಕವಾಗಿ ಸಲ್ಲಿಸಿದರು.

---

ತಮಿಳುನಾಡಿನ ನೂತನ ಮುಖ್ಯಮಂತ್ರಿಯಾಗಿ ತಮಿಳಿಗ ವೆಟ್ರಿಕಳಗಂ ಪಕ್ಷದ ಮುಖ್ಯಸ್ಥ, ನಟ ಸಿ.ಜೋಸೆಫ್ ವಿಜಯ್ ಇಂದು ಪ್ರಮಾಣ ವಚನ ಸ್ವೀಕರಿಸಿದರು.

ಅವರೊಂದಿಗೆ ೯ ಶಾಸಕರು ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಲಕ್ಷಾಂತರ ಅಭಿಮಾನಿಗಳು ಪ್ರಮಾಣವಚನ ಕಾರ್ಯಕ್ರಮಕ್ಕೆ ಸಾಕ್ಷಿಯಾದರು.

ಚೆನ್ನೈನ ಜವಾಹರ್ ಲಾಲ್ ನೆಹರು ಒಳಾಂಗಣ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ರಾಜ್ಯಪಾಲ ರಾಜೇಂದ್ರ ವಿಶ್ವನಾಥ ಅರ್ಲೇಕರ್ ಅವರು, ಜೋಸೆಫ್ ವಿಜಯ್ ಅವರಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಅವರೊಂದಿಗೆ ಎನ್.ಆನಂದ್, ಕೆ.ಜಿ.ಅರುಣ ರಾಜ್, ಕೆ.ಎ.ಸೆಂಗೋಟ್ಟಯ್ಯನ್, ಆಧವ್ ಅರ್ಜುನ್, ಸಿ.ಟಿ.ಆರ್.ನಿರ್ಮಲ್ ಕುಮಾರ್, ಎ.ರಾಜ್ ಮೋಹನ್, ಕೆ.ಟಿ.ಪ್ರಭು ಮತ್ತು ಎಸ್. ಕೀರ್ತನಾ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ತಮಿಳುನಾಡಿನ ನೂತನ ಮುಖ್ಯಮಂತ್ರಿ ವಿಜಯ್ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಶುಭಾಶಯ ಕೋರಿದ್ದಾರೆ.

೨೩೪ ಸದಸ್ಯ ಬಲದ ತಮಿಳುನಾಡು ವಿಧಾನಸಭೆಯಲ್ಲಿ ೧೦೮ ಸ್ಥಾನಗಳಲ್ಲಿ ಗೆದ್ದಿರುವ ಟಿವಿಕೆ, ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿತ್ತು. ಫಲಿತಾಂಶದ ಬಳಿಕ ನಡೆದ ಬೆಳವಣಿಗೆಗಳ ನಂತರ, ಕಾಂಗ್ರೆಸ್‌ನ ೫ ಹಾಗೂ ಸಿಪಿಐ, ಸಿಪಿಐಎಂ, ವಿಸಿಕೆ ಹಾಗೂ ಐಯುಎಂಎಲ್‌ನ ತಲಾ ಇಬ್ಬರು ಶಾಸಕರ ಬೆಂಬಲದೊಂದಿಗೆ ವಿಜಯ್, ಸರ್ಕಾರ ರಚನೆ ಮಾಡಿದ್ದಾರೆ.

ಇದೇ ತಿಂಗಳ ೧೩ರಂದು ವಿಜಯ್, ವಿಧಾನಸಭೆಯಲ್ಲಿ ವಿಶ್ವಾಸ ಮತಯಾಚಿಸಲಿದ್ದಾರೆ.

ಪ್ರಮಾಣ ವಚನ ಕಾರ್ಯಕ್ರಮದ ಬಳಿಕ ರಾಜ್ಯಾದ್ಯಂತ ಎಲ್ಲ ಮನೆಗಳಿಗೂ ೨೦೦ ಯೂನಿಟ್ ವರೆಗೆ ಉಚಿತ ವಿದ್ಯುತ್ ನೀಡುವ ಖಾತರಿ ಯೋಜನೆಗೆ ಅವರು ಸಹಿ ಹಾಕಿದರು.

---

ಉತ್ತರ ಪ್ರದೇಶದಲ್ಲಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ತಮ್ಮ ಸಚಿವ ಸಂಪುಟವನ್ನು ವಿಸ್ತರಿಸಿದ್ದು, ಆರು ಬಿಜೆಪಿ ನಾಯಕರು ಸಚಿವರಾಗಿ ಇಂದು ಪ್ರಮಾಣವಚನ ಸ್ವೀಕರಿಸಿದರು.

ಲಖ್ನೋದ ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲರಾದ ಆನಂದಿಬೆನ್ ಪಟೇಲ್ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು.

ಬಿಜೆಪಿ ಮಾಜಿ ರಾಜ್ಯಾಧ್ಯಕ್ಷ ಭೂಪೇಂದ್ರ ಚೌಧರಿ ಮತ್ತು ಬಿಜೆಪಿ ನಾಯಕ ಮನೋಜ್ ಪಾಂಡೆ ಅವರು ಸಂಪುಟ ಸಚಿವರಾಗಿದ್ದಾರೆ. ರಾಜ್ಯ ಸಚಿವರಾದ ಅಜಿತ್ ಪಾಲ್‌ಸಿಂಗ್ ಮತ್ತು ಸೋಮೇಂದ್ರ ತೋಮರ್ ಅವರಿಗೆ ಬಡ್ತಿ ನೀಡಿ, ಸ್ವತಂತ್ರ ಖಾತೆ ನೀಡಲಾಗಿದೆ.

ಈ ನಡುವೆ ಕೃಷ್ಣ ಪಾಸ್ವಾನ್, ಸುರೇಂದ್ರ ದಿಲೇರ್, ಹಂಸರಾಜ್ ವಿಶ್ವಕರ್ಮ ಮತ್ತು ಕೈಲಾಶ್ ರಾಜ್‌ಪುತ್ ಅವರು ರಾಜ್ಯ ಸಚಿವರಾಗಿ ಯೋಗಿ ಆದಿತ್ಯನಾಥ್ ಅವರ ಸಂಪುಟ ಸೇರ್ಪಡೆಯಾಗಿದ್ದಾರೆ.

ಇತ್ತೀಚಿನ ವಿಸ್ತರಣೆಯೊಂದಿಗೆ ೪೦೩ ಸದಸ್ಯರ ಉತ್ತರ ಪ್ರದೇಶ ವಿಧಾನಸಭೆಯಲ್ಲಿ ಸಚಿವ ಸಂಪುಟದ ಬಲವು ೬೦ಕ್ಕೆ ತಲುಪಿದೆ. ಇದು ಗರಿಷ್ಠ ಅನುಮತಿಸಲಾದ ಸಂಖ್ಯೆಯಾಗಿದೆ.

__________________

ಸಂಭವನೀಯ ಪ್ರವಾಹ ಮತ್ತು ಉಷ್ಣ ಅಲೆಯ ಪರಿಸ್ಥಿತಿಗಳನ್ನು ಎದುರಿಸಲು ದೇಶದ ಸನ್ನದ್ಧತೆಯನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಪರಿಶೀಲಿಸಿದರು.

ನವದೆಹಲಿಯಲ್ಲಿ ಇಂದು ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಜೀವ ಹಾನಿ ತಡೆ ಮತ್ತು ಕನಿಷ್ಠ ಆಸ್ತಿ ಹಾನಿಯನ್ನು ಖಚಿತಪಡಿಸಿಕೊಳ್ಳಲು ಮುನ್ನೆಚ್ಚರಿಕಾ ವ್ಯವಸ್ಥೆಗಳು ಸಂಪನ್ಮೂಲ ನಿಯೋಜನೆ ಮತ್ತು ಅಂತರ್ ಸಚಿವಾಲಯಗಳ ಸಮನ್ವಯವನ್ನು ಪರಿಶೀಲಿಸಿದರು.

ನಿರ್ಣಾಯಕ ಮೂಲಸೌಕರ್ಯ ಯೋಜನೆಗಳ ರಕ್ಷಣೆ, ನದಿ ನಿರ್ವಹಣಾ ಉಪಕ್ರಮಗಳು ಮತ್ತು ಮುನ್ಸೂಚನೆಯಲ್ಲಿ ವೈಜ್ಞಾನಿಕ ಪ್ರಗತಿ ಸೇರಿದಂತೆ ದೇಶಾದ್ಯಂತ ಕೈಗೊಳ್ಳಲಾಗುತ್ತಿರುವ ದೀರ್ಘಕಾಲಿನ ಪ್ರವಾಹ ತಗ್ಗಿಸುವ ಕ್ರಮಗಳ ಪ್ರಗತಿಯನ್ನು ಸಚಿವರು ಪರಿಶೀಲಿಸಿದರು.

__________________

ಗುಜರಾತ್‌ನ ಪ್ರಸಿದ್ಧ ಸೋಮನಾಥ ದೇವಾಲಯವು, ಜಾಗತಿಕ ಆಧ್ಯಾತ್ಮಿಕ ಮತ್ತು ಸುಸ್ಥಿರ ಪ್ರವಾಸೋದ್ಯಮ ಕೇಂದ್ರವಾಗಿ ವಿಕಸನಗೊಳ್ಳುತ್ತಿರುವ ತನ್ನ ಆಧುನಿಕ ಪ್ರಯಾಣದ ಎಪ್ಪತ್ತೈದು ವರ್ಷಗಳನ್ನು ಆಚರಿಸುತ್ತಿದೆ.

೧೯೫೧ರಲ್ಲಿ ಭಾರತದ ಮೊದಲ ರಾಷ್ಟ್ರಪತಿ ಬಾಬು ರಾಜೇಂದ್ರ ಪ್ರಸಾದ್ ಅವರು ಪುನಃಸ್ಥಾಪಿಸಿದ ದೇವಾಲಯ ಉದ್ಘಾಟಿಸಿ ೭೫ ವರ್ಷಗಳನ್ನು ಪೂರೈಸಿದ ಸ್ಮರಣಾರ್ಥ ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಸೋಮನಾಥ ದೇವಾಲಯಕ್ಕೆ ಭೇಟಿ ನೀಡಲಿದ್ದಾರೆ. ಸೋಮನಾಥ ಟ್ರಸ್ಟ್‌ನ ಅಧ್ಯಕ್ಷರಾಗಿ ಅವರ ನೇತೃತ್ವದಲ್ಲಿ ದೇವಾಲಯವು 'ಸೋಮನಾಥ ಅಮೃತ ಪರ್ವ' ಆಚರಿಸಲು ಸಜ್ಜಾಗಿದೆ.

__________________

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ದಿನದ ಮೊದಲ ಪಂದ್ಯದಲ್ಲಿ ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ ೫ ವಿಕೆಟ್‌ಗಳಿಂದ ಗೆಲುವು ಸಾಧಿಸಿದೆ.

ರಾಯ್‌ಪುರದ ಶಹೀದ್ ವೀರ್ ನಾರಾಯಣ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮತ್ತೊಂದು ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

_________________

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಅವರು ತಾಯಂದಿರ ದಿನದ ಸಂದರ್ಭದಲ್ಲಿ ಮುಂಬೈನಲ್ಲಿ ಇಂದು 'ತಾಯಿ ಪೌಷ್ಟಿಕಾಂಶ ಕಿಟ್'ಗಳನ್ನು ವಿತರಿಸಿದರು. ಈ ವೇಳೆ ನವಜಾತ ಶಿಶುಗಳ ಆರೋಗ್ಯ ಮತ್ತು ಯೋಗಕ್ಷೇಮ ಖಚಿತಪಡಿಸಿಕೊಳ್ಳುವ ಮಹತ್ವವನ್ನು ಒತ್ತಿ ಹೇಳಿದರು.

ಉತ್ತರ ಮುಂಬೈನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗರ್ಭಧಾರಣೆಯ ಅಂತಿಮ ಹಂತಗಳಲ್ಲಿ ಮಹಿಳೆಯರ ಪೌಷ್ಟಿಕಾಂಶ ಮತ್ತು ಅಗತ್ಯಗಳನ್ನು ಹಾಗೂ ನವಜಾತ ಶಿಶುಗಳ ತಕ್ಷಣದ ಅವಶ್ಯಕತೆಗಳನ್ನು ಗಮನದಲ್ಲಿಟ್ಟಿಕೊಂಡು ವಿಶೇಷವಾಗಿ ವಿನ್ಯಾಸಗೊಳಿಸಲಾದ ಕಿಟ್‌ಗಳನ್ನು ತಯಾರಿಸಲಾಗಿದೆ ಎಂದು ಹೇಳಿದರು.

_________________

ಅಮೆರಿಕಾ ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರುಬಿಯೊ ಮತ್ತು ಅಮೆರಿಕಾದ ವಿಶೇಷ ರಾಯಭಾರಿ ಸ್ಟೀವ್ ವಿಟ್‌ಕಾಫ್ ಮಿಯಾಮಿಯಲ್ಲಿ ಕತಾರ್ ಪ್ರಧಾನಿ ಮತ್ತು ವಿದೇಶಾಂಗ ಸಚಿವ ಮೊಹಮ್ಮದ್ ಬಿನ್ ಅಬ್ದುಲ್ ರೆಹಮಾನ್ ಅಲ್ ಥಾನಿ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಇದಕ್ಕೂ ಮುನ್ನ, ವಾಷಿಂಗ್ಟನ್‌ನಲ್ಲಿ ಅಲ್ ಥಾನಿ ಅವರು ಅಮೆರಿಕಾ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಅವರೊಂದಿಗೆ ಸಭೆ ನಡೆಸಿದ್ದರು.

_________ಮುಕ್ತಾಯ_________